ಮೊದಲನೇ ಪುಟದಿಂದ

# ಮಳೆಗಾಗಿ ಜೆಡಿಎಸ್ ಪಕ್ಷದಿಂದ ನೀರಮಾನ್ವಿ ರೇಣುಕಾ ಯಲ್ಲಮ್ಮ ದೇವಸ್ಥಾನಕ್ಕೆ ಪಾದಯಾತ್ರೆ

ನೀರಮಾನ್ವಿ ಗ್ರಾಮದ ವರೆಗೆ ಪಾದಯಾತ್ರೆ ಮೂಲಕ ತೆರಳಿ ಶ್ರೀ ರೇಣುಕಾ ಯಲ್ಲಮ್ಮ ದೇವಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು.,ಪಾದಯಾತ್ರೆಯಲ್ಲಿ ಭಜನ ಮಂಡಳಿಯವರು ಶಿವನ ಕುರಿತು ಭಜನೆ ಹಾಡುಗಳನ್ನು ಹಾಡಿದರೆ ಗ್ರಾಮೀಣ ಭಾಗದ ಮಹಿಳೆಯರು ಜನಪದ ಮಳೆ ಹಾಡುಗಳನ್ನು ಹಾಡಿದರು. ಮಾನ್ವಿ ಮತ್ತು ಸಿರವಾರ ತಾಲೂಕುಗಳ ಜೆಡಿಎಸ್ ಕಾರ್ಯಕರ್ತರು. ರೈತ ಮೋರ್ಚ,ಮಹಿಳಾ ಘಟಕದ ಪದಾಧಿಕಾರಿಗಳು ಸೇರಿದಂತೆ ಸಾವಿರಾರು ಜನರು ಪಾದಯಾತ್ರೆಯಲ್ಲಿ ಭಾಗವಹಿಸಿದರು.ರಾಜ್ಯ ಜೆಡಿಎಸ್ ಯುವ ಘಟಕದ ಉಪಾಧ್ಯಕ್ಷರಾದ ರಾಜಾ ರಾಮಚಂದ್ರನಾಯಕ, ಮಾನ್ವಿ ಜೆಡಿಎಸ್ ಪಕ್ಷದ ಅಧ್ಯಕ್ಷರಾದ ಈರಣ್ಣ ಮರ್ಲಾಟ್ಟಿ, ಸಿರವಾರ ಜೆಡಿಎಸ್ ಪಕ್ಷದ ಅಧ್ಯಕ್ಷರಾದ ಟಿ.ಮಲ್ಲಿಕಾರ್ಜುನಪಾಟೀಲ್ ಬಲ್ಲಟಗಿ, ನಗರ ಘಟಕದ ಅಧ್ಯಕ್ಷರಾದ ಹೆಚ್.ಮೌನೇಶ್ ಗೌಡ, ರೈತ ಘಟಕದ ಅಧ್ಯಕ್ಷರಾದ ಶರಣಪ್ಪಗೌಡ, ಮದ್ಲಾಪುರ್,ಮುಖಂಡರಾದ ಬಾಷಸಾಬ್ ಸೇರಿದಂತೆ ಇನ್ನಿತರರು ಇದ್ದರು.

# ಸಂಪುಟ ವಿಸ್ತರಣೆಯಲ್ಲಿ ಸಿಎಂ ಜಾಣ ನಡೆ : ಕೇವಲ ನಾಲ್ವರ ಹೆಸರು ಶಿಫಾರಸು

ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಅವರು ಸೂಚಿಸಿದ ಹೆಸರುಗಳನ್ನು ಪರಿಗಣಿಸುವುದಾಗಿ ತಿಳಿಸಿದ್ದಾರೆ.

**ತೀವ್ರಗೊಂಡ ಪೈಪೋಟಿ:** ಸಂಪುಟದಲ್ಲಿ ಹಳಬರಿಗೆ ಕಡಿಮೆ ಅವಕಾಶ ಕೊಟ್ಟು ಹೊಸ ಮುಖಗಳಿಗೆ ಹೆಚ್ಚಿನದಾಗಿ ಮಣೆ ಹಾಕಲು ಚರ್ಚೆಯಾಗುತ್ತಿದೆ. ಆದರೂ ಸಿದ್ದರಾಮಯ್ಯ ಸಂಪುಟದಲ್ಲಿ ಸಚಿವರಾಗಿದ್ದವರ ಪೈಕಿ ರಹೀಂಖಾನ್, ಸಂತೋಷ್ ಲಾಡ್, ಆರ್.ಬಿ.ತಿಮಾಪುರ್, ಶಿವರಾಜ್ ತಂಗಡಗಿ, ದಿನೇಶ್ ಗುಂಡೂರಾವ್, ಲಕ್ಷ್ಮಿ ಹೆಬ್ಬಾಳ್ಕರ್, ಮಧು ಬಂಗಾರಪ್ಪ, ಡಾ.ಎಂ.ಸಿ.ಸುಧಾಕರ್, ಮಂಕಾಳ ವೈದ್ಯ ಅವರು ಮರಳಿ ಅವಕಾಶ ಗಿಟ್ಟಿಸಲು ಪ್ರಯತ್ನಿಸುತ್ತಿದ್ದಾರೆ.9 ಬಾರಿ ಶಾಸಕರಾಗಿರುವ ಹಿರಿಯರಾದ ಆರ್.ವಿ.ದೇಶಪಾಂಡೆಯವರನ್ನು ವಿಧಾನಸಭಾ ಅಧ್ಯಕ್ಷ ಸ್ಥಾನಕ್ಕೆ ಒಪ್ಪಿಸಲು ಚರ್ಚೆಗಳಾಗಿವೆ. ಒಂದು ವೇಳೆ ಅವರು ನಿರಾಕರಿಸಿದರೆ, ಟಿ.ಬಿ.ಜಯಚಂದ್ರ, ಸಿ.ಎಸ್.ನಾಡಗೌಡ, ದಿನೇಶ್ ಗುಂಡೂರಾವ್ ಅವರ ಹೆಸರುಗಳನ್ನು ಪರಿಶೀಲಿಸುವ ಸಾಧ್ಯತೆ ಇದೆ.

7 ಬಾರಿ ಶಾಸಕರಾಗಿ ಆಯ್ಕೆಯಾಗಿದ್ದರೂ ಈವರೆಗೂ ಒಮ್ಮೆಯೂ ಸಚಿವರಾಗದೇ ಇರುವ ಎನ್.ವೈ.ಗೋಪಾಲಕೃಷ್ಣ ಅವರ ಹೆಸರು ಪ್ರಮುಖವಾಗಿ ಕೇಳಿ ಬಂದಿದೆ. ಆದರೆ ವಯಸ್ಸಿನ ಕಾರಣಕ್ಕಾಗಿ ವರಿಷ್ಠರು ಮರುಪರಿಶೀಲನೆ ನಡೆಸುತ್ತಿದ್ದಾರೆ.

ಟಿ.ಬಿ.ಜಯಚಂದ್ರ ಅವರು ತಮ ಹಿರಿತನ ಮತ್ತು ಸಾಮಾಜಿಕ ನ್ಯಾಯದ ಅನುಸಾರ ತಮಗೆ ಅವಕಾಶ ಸಿಗಲಿದೆ ಎಂದು ನಿರೀಕ್ಷಿಸಿದ್ದಾರೆ. ಆರು ಬಾರಿ ಶಾಸಕರಾಗಿರುವ ಸಿ.ಎಸ್.ನಾಡಗೌಡ ಹೆಸರು ಮುಂಚೂಣಿಯಲ್ಲಿದೆ. 5 ಬಾರಿ ಶಾಸಕರಾಗಿರುವ ಹಂಪನಗೌಡ ಬಾದರ್ಲಿ, ಎಚ್.ಸಿ.ಬಾಲಕೃಷ್ಣ, ಎಸ್.ಆರ್.ಶ್ರೀನಿವಾಸ್. ನಾಲ್ಕು ಬಾರಿ ಶಾಸಕರಾಗಿರುವ ಎನ್.ಎ.ಹ್ಯಾರಿಸ್, ಲಕ್ಷ್ಮಣ ಸವದಿ, ಪುಟ್ಟರಂಗ ಶೆಟ್ಟಿ, ಕೆ.ಎಂ.ಶಿವಲಿಂಗೇಗೌಡ, ಬಿ.ಕೆ.ಸಂಗಮೇಶ್ವರ್ ಪ್ರಬಲ ಲಾಬಿ ನಡೆಸುತ್ತಿದ್ದಾರೆ.

ಲಕ್ಷ್ಮಣ ಸವದಿ ಬಿಜೆಪಿಯಿಂದ ವಲಸೆ ಬಂದಿದ್ದು ಅಲ್ಲಿ ಉಪ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ್ದರು. ಪುಟ್ಟರಂಗ ಶೆಟ್ಟಿ ಹಿಂದೆ ಸಚಿವರಾಗಿದ್ದವರು. ಆದರೆ ವಿವಾದಕ್ಕೆ ಸಿಲುಕಿದ್ದರು.

ಮೂರು ಬಾರಿ ಶಾಸಕರಾಗಿ ಒಮ್ಮೆಯೂ ಸಚಿವರಾಗದಿರುವ ಪ್ರಸಾದ್ ಅಬ್ಬಯ್ಯ, ಡಾ.ಅಜಯ್‌ಸಿಂಗ್, ಪಿ.ಎಂ.ಅಶೋಕ್, ಎ.ಆರ್.ಕೃಷ್ಣ ಮೂರ್ತಿ, ಎಸ್.ಎನ್.ನಾರಾಯಣಸ್ವಾಮಿ, ಪ್ರಿಯಕೃಷ್ಣ, ಬಿ.ಶಿವಣ್ಣ, ಡಿ.ಜಿ.ಶಾಂತನಗೌಡ, ಕೆ.ಷಡಕ್ಷರಿ, ಯಶವಂತರಾಯಗೌಡ ಪಾಟೀಲ್ ಅವರು ವರಿಷ್ಠ ನಾಯಕರ ಮೇಲೆ ಒತ್ತಡ ಹಾಕುತ್ತಿದ್ದಾರೆ.

ಮಂಡ್ಯ ಜಿಲ್ಲೆಯಿಂದ ಪಿ.ಎಂ.ನರೇಂದ್ರಸ್ವಾಮಿ ಅವಕಾಶ ಕೇಳುತ್ತಿದ್ದಾರೆ. ಆದರೆ ಮಾಜಿ ಸಚಿವ ಎನ್.ಚೆಲುವರಾಯಸ್ವಾಮಿ ಅವರ ಪೈಪೋಟಿಯಿಂದಾಗಿ ಮಂಡ್ಯ ಜಿಲ್ಲೆಯಲ್ಲಿ ಯಾರಿಗೆ ಅವಕಾಶ ದಕ್ಕಲಿದೆ ಎಂದು ಕಾದು ನೋಡಬೇಕಿದೆ.

ಶಾಸಕರಾಗಿರುವ ಬಸನಗೌಡ ದದ್ದಲ್, ವಿಜಯಾನಂದ ಕಾಶಪ್ಪನವರ್, ಕೋನರೆಡ್ಡಿ, ಕೆ.ವೈ.ನಂಜೇಗೌಡ, ರಿಜ್ವಾನ್ ಅರ್ಷದ್, ಶರತ್ ಬಚ್ಚೆಗೌಡ ಅವರು ರೇಸ್‌ನಲ್ಲಿದ್ದಾರೆ.

ಇಷ್ಟು ಜನ ಪ್ರಮುಖ ಆಕಾಂಕ್ಷಿಗಳ ಪೈಕಿ 20 ಜನರಿಗೆ ಅವಕಾಶ ನೀಡಬೇಕಿದೆ.

# ಮೀನುಗಾರಿಕೆ ಇಲಾಖೆಯಿಂದ ವಿವಿಧ ಸಲಕರಣೆ ವಿತರಣೆಗೆ ಅರ್ಜಿ ಆಹ್ವಾನ

**ರಾಯಚೂರು ಜುಲೈ 17 :** ರಾಯಚೂರಿನ ಮೀನುಗಾರಿಕೆ ಇಲಾಖೆ ವತಿಯಿಂದ 2026-27ನೇ ಸಾಲಿನ ಜಿಲ್ಲಾ ಪಂಚಾಯತ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಸಾಮಾನ್ಯ ವರ್ಗದ ಮೀನುಗಾರರಿಗೆ ಉಚಿತವಾಗಿ ವಿವಿಧ ಸಲಕರಣೆ ವಿತರಣೆ ಅರ್ಜಿ ಆಹ್ವಾನಿಸಲಾಗಿದೆ.

ಯೋಜನೆಯಡಿ ಮೀನುಗಾರಿಕೆ ಸಲಕರಣೆ ಕಿಟ್ಟಳ ವಿತರಣೆ ಹಾಗೂ ಮತ್ಸ ವಾಹಿನಿ ಯೋಜನೆಯಡಿ ದ್ವಿಚಕ್ರ ವಾಹನ ಮತ್ತು ಐಸ್ ಬಾಕ್ಸ ಖರೀದಿಸಿದವರಿಗೆ ಸಹಾಯಧನ ನೀಡಲಾಗುವುದು. ಆಸಕ್ತರು ಅರ್ಜಿಯನ್ನು ಆಗಸ್ಟ್ 25ರೊಳಗಾಗಿ ವೆಬ್‌ಸೈಟ್ ವಿಳಾಸ: raichur.nic.in ಮೂಲಕ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಉಪ ನಿರ್ದೇಶಕರು ರಾಯಚೂರು ಅಥವಾ ಸಂಬಂಧಿಸಿದ ಮೀನುಗಾರಿಕೆ ಸಹಾಯಕ ನಿರ್ದೇಶಕರು ರಾಯಚೂರು, ಲಿಂಗಸೂಗೂರು, ಸಿಂಧನೂರು ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಮೀನುಗಾರಿಕೆ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜುಲೈ 18ರಂದು ವಿದ್ಯುತ್ ಗ್ರಾಹಕರ ಸಂವಾದ ಸಭೆ

**ರಾಯಚೂರು ಜುಲೈ 17:** ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 1ರ ಕಚೇರಿ, ಕೆ.ಇ.ಬಿ ಕ್ವಾಟರ್ಸ್, ಡಿ.ಸಿ ಮನೆ ಎದುರುಗಡೆ, ಲಿಂಗಸೂಗೂರು ರೋಡ್ ರಾಯಚೂರಿನಲ್ಲಿ ಜುಲೈ 18ರ ಬೆಳಿಗ್ಗೆ 11ಗಂಟೆಗೆ ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ವಿದ್ಯುತ್ ಗ್ರಾಹಕರು ವಿದ್ಯುತ್ ದೂರುಗಳ ಬಗ್ಗೆ ಸಭೆಗೆ ಹಾಜರಾಗಿ ದೂರನ್ನು ಇತ್ಯರ್ಥಪಡಿಸಿಕೊಳ್ಳಲು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜುಲೈ 21ರಂದು ಹಡಪದ ಅಪ್ಪಣ್ಣ ಜಯಂತಿ ಪೂರ್ವಭಾವಿ ಸಭೆ

**ರಾಯಚೂರು ಜುಲೈ 17 :** ರಾಯಚೂರು ಜಿಲ್ಲಾಡಳಿತದ ವತಿಯಿಂದ ಜುಲೈ 29ರಂದು ಶ್ರೀ ಹಡಪದ ಅಪ್ಪಣ್ಣ ಅವರ ಜಯಂತಿ ನಡೆಯಲಿವೆ.

ಈ ಜಯಂತಿ ಅಂಗವಾಗಿ ಜುಲೈ 21ರ ಬೆಳಿಗ್ಗೆ 11ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದ್ದು, ಸಮಾಜದ ಮುಖಂಡರು, ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿ ಸೂಕ್ತ ಸಲಹೆ ಸೂಚನೆ ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜುಲೈ 21ರಂದು ಸದಸ್ಯರ ನೇಮಕ ಕುರಿತು ಪೂರ್ವಭಾವಿ ಸಭೆ

**ರಾಯಚೂರು ಜುಲೈ 17:** ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಜಿಲ್ಲಾ ಮಟ್ಟದಲ್ಲಿ ರಚಿಸಿರುವ ಕನ್ನಡ ಜಾಗೃತಿ ಸಮಿತಿಗೆ ಅಧಿಕಾರೇತರ ಸದಸ್ಯರನ್ನು ಸರ್ಕಾರದ ಆದೇಶಾನುಸಾರ ನೇಮಕ ಮಾಡಲು ಜುಲೈ 21ರ ಬೆಳಿಗ್ಗೆ 11.30ಕ್ಕೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಸಭೆಯನ್ನು ಹಮ್ಮಿಕೊಳ್ಳಲಾಗಿದೆ.

ಸರ್ಕಾರದ ಆದೇಶದಲ್ಲಿ ಕನ್ನಡ ಜಾಗೃತಿ ಸಮಿತಿ ಸದಸ್ಯರ ಕಾರ್ಯವ್ಯಾಪ್ತಿಯ ಕುರಿತಂತೆ ವಿವರಿಸಲಾಗಿದ್ದು, ಇದರನುಸಾರವಾಗಿ ಕನ್ನಡ ಪರ ಕಾರ್ಯಕ್ರಮಗಳು ಮತ್ತು ಇತರೆ ಸಭೆಗಳನ್ನು ಅತಂತ್ಯ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಹಿನ್ನಲೆಯಲ್ಲಿ ಪೂರ್ವಭಾವಿ ಸಭೆಯನ್ನು ಆಯೋಜನೆ ಮಾಡಲಾಗಿದ್ದು, ಸಂಬಂಧಿಸಿದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಸಲಹೆ ಮತ್ತು ಸೂಚನೆಗಳನ್ನು ನೀಡುವಂತೆ ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚಾಮುಂಡಿ ಬೆಟ್ಟದಲ್ಲಿ ಆಷಾಢ ಮಾಸ ಸಂಭ್ರಮ: ಹರಿದು ಬಂದ ಭಕ್ತಗಣ



**ಮೈಸೂರು, ಜು.17:** ಆಷಾಢ ಮಾಸದ ಮೊದಲ ಶುಕ್ರವಾರದಂದು ನಾಡ ಅಧಿದೇವತೆ ಶ್ರೀ ಚಾಮುಂಡೇಶ್ವರಿ ಸನ್ನಿಧಿ ಭಕ್ತರ ಸಾಗರದಿಂದ ತುಂಬಿ ಹೋಯಿತು. ಬೆಳಗಿನ ಜಾವ 4 ಗಂಟೆಯಿಂದಲೇ ಸಾವಿರಾರು ಭಕ್ತರು ಬೆಟ್ಟದ ತಪ್ಪಲಿನಲ್ಲಿ ಜಮಾಯಿಸಿ ಸರತಿ ಸಾಲಿನಲ್ಲಿ ನಿಂತು ತಾಯಿಯ ದರ್ಶನಕ್ಕಾಗಿ ಕಾದು ಕುಳಿತರು. "ಜೈ ಚಾಮುಂಡೇಶ್ವರಿ", "ಅಮ್ಮಾ ತಾಯೇ" ಎಂಬ ಘೋಷಣೆಗಳು ಬೆಟ್ಟವೆಲ್ಲಾ ಪ್ರತಿಧ್ವನಿಸಿದವು.

ವಿಶೇಷವಾಗಿ ಅಲಂಕರಿಸಲಾಗಿದ್ದ ದೇಗುಲದಲ್ಲಿ ತಾಯಿ ಚಾಮುಂಡೇಶ್ವರಿಗೆ ಕುಂಕುಮಾರ್ಚನೆ, ಪಂಚಾಮೃತ ಅಭಿಷೇಕ, ಮಹಾಮಂಗಳಾರತಿ ನೆರವೇರಿಸಲಾಯಿತು. ವಿವಿಧ ಬಗೆಯ ತಾಜಾ ಹೂಗಳು, ಹಣ್ಣುಗಳು ಮತ್ತು ಅಲಂಕಾರಿಕ ವಸ್ತುಗಳಿಂದ ಗರ್ಭಗುಡಿ, ದೇವಸ್ಥಾನ ಹಾಗೂ ಏಳು ಮಹಡಿಯ ಗೋಪುರಕ್ಕೆ ಮನೋಹರ ಅಲಂಕಾರ ಮಾಡಲಾಗಿತ್ತು. ಹಸಿರು ಮತ್ತು ಕೆಂಪು ಬಣ್ಣದ ದುಬಾರಿ ರೇಷ್ಮೆ ಸೀರೆಯಲ್ಲಿ ಉತ್ಸವ ಮೂರ್ತಿಯನ್ನು ಲಕ್ಷ್ಮೀ ಅಲಂಕಾರದಲ್ಲಿ ಸಿಂಗರಿಸಲಾಗಿದ್ದು, ಲಕ್ಷಾಂತರ ಭಕ್ತರ ಕಣ್ಣುಗಳಿಗೆ ಹಬ್ಬವಾಯಿತು.

ಜನಪ್ರತಿನಿಧಿಗಳ ಭೇಟಿ, ವಿಶೇಷ ಪ್ರಾರ್ಥನೆ: ಆಷಾಢ ಮಾಸದ ಮೊದಲ ಶುಕ್ರವಾರದ ವಿಶೇಷ ಪೂಜೆಯಲ್ಲಿ ಭಾಗವಹಿಸಲು ಹಲವು ಶಾಸಕರು, ಸಂಸದರು ಹಾಗೂ ಸ್ಥಳೀಯ ಜನಪ್ರತಿನಿಧಿಗಳು ದೇಗುಲಕ್ಕೆ ಭೇಟಿ ನೀಡಿದರು. ತಾಯಿಯ ದರ್ಶನ ಪಡೆದು ನಾಡಿನ ಒಳಿತಿಗಾಗಿ ಪ್ರಾರ್ಥನೆ ಸಲ್ಲಿಸಿದರು. ಈ ಬಾರಿ ರಾಜ್ಯದಲ್ಲಿ ಮುಂಗಾರು ಮಳೆ ಉತ್ತಮವಾಗಿ ಬಂದು ರೈತರ ಬದುಕು ಸಮೃದ್ಧಿಯಾಗಲಿ, ರೋಗ-ರುಜಿನ ಇಲ್ಲದೆ ಜನರು ಸುಖವಾಗಿರಲಿ ಎಂದು ತಾಯಿಯಲ್ಲಿ ಮೊರೆ ಇಟ್ಟರು.

ದೇವಸ್ಥಾನದ ಪ್ರಧಾನ ಅರ್ಚಕ ಡಾ. ಶಶಿಶೇಖರ್ ದೀಕ್ಷಿತ್ ಮಾತನಾಡಿ, "ಆಷಾಡ ಮಾಸವು ಶಕ್ತಿ ಆರಾಧನೆಗೆ ಅತ್ಯಂತ ಪವಿತ್ರವಾದ ಮಾಸ. ಈ ತಿಂಗಳ ನಾಲ್ಕು ಶುಕ್ರವಾರಗಳೂ ತಾಯಿಗೆ ಲಕ್ಷ್ಮೀ ಅಲಂಕಾರ ಮಾಡಲಾಗುತ್ತದೆ. ಭಕ್ತರು ವ್ರತ, ಪೂಜೆ, ದಾನ-ಧರ್ಮ ಮಾಡಿ ತಮ್ಮ ಇಷ್ಟಾರ್ಥಗಳನ್ನು ಬೇಡಿಕೊಳ್ಳುತ್ತಾರೆ. ಶ್ರದ್ಧಾ ಭಕ್ತಿಯಿಂದ ಪೂಜಿಸಿದರೆ ತಾಯಿ ಎಲ್ಲರ ಕೋರಿಕೆಯನ್ನು ಈಡೇರಿಸುತ್ತಾಳೆ" ಎಂದು ತಿಳಿಸಿದರು.

ಆಷಾಢದ ಮಹತ್ವ: ಹಿಂದೂ ಧರ್ಮದಲ್ಲಿ ಆಷಾಢ ಮಾಸಕ್ಕೆ ವಿಶೇಷ ಸ್ಥಾನವಿದೆ. ಈ ಮಾಸದಲ್ಲಿ ಶಕ್ತಿ ದೇವತೆಗಳ ಆರಾಧನೆಗೆ ಹೆಚ್ಚಿನ ಮಹತ್ವ ನೀಡಲಾಗುತ್ತದೆ. ಮಹಿಳೆಯರು ವಿಶೇಷವಾಗಿ ವ್ರತಾಚರಣೆ ಮಾಡಿ ಕುಟುಂಬದ ಸುಖ-ಶಾಂತಿಗಾಗಿ ಪ್ರಾರ್ಥಿಸುತ್ತಾರೆ. ಮೈಸೂರಿನ ಚಾಮುಂಡಿ ಬೆಟ್ಟ ಮಾತ್ರವಲ್ಲ, ರಾಜ್ಯದ ಎಲ್ಲಾ ಶಕ್ತಿ ದೇವಾಲಯಗಳಲ್ಲೂ ವಿಶೇಷ ಪೂಜೆಗಳು ನಡೆಯುತ್ತವೆ.

ಚಾಮುಂಡೇಶ್ವರಿ ದೇಗುಲದಲ್ಲಿ ಆಷಾಡದ ನಾಲ್ಕು ಶುಕ್ರವಾರಗಳೂ ವಿವಿಧ ಅಲಂಕಾರಗಳು ಇರುತ್ತವೆ. ಮೊದಲ ಶುಕ್ರವಾರ ಲಕ್ಷ್ಮೀ ಅಲಂಕಾರ, ಎರಡನೇ ಶುಕ್ರವಾರ ಸರಸ್ವತಿ ಅಲಂಕಾರ, ಮೂರನೇ ಶುಕ್ರವಾರ ದುರ್ಗಾ ಅಲಂಕಾರ ಮತ್ತು ನಾಲ್ಕನೇ ಶುಕ್ರವಾರ ಮಹಿಷಾಸುರ ಮರ್ದಿನಿ ಅಲಂಕಾರ ಮಾಡಲಾಗುತ್ತದೆ. ಈ ಹಿನ್ನೆಲೆಯಲ್ಲಿ ಈ ತಿಂಗಳಾದ್ಯಂತ ಭಕ್ತರ ದಟ್ಟಣೆ ನಿರೀಕ್ಷಿಸಲಾಗಿದೆ.

ಅಚ್ಚುಕಟ್ಟಾದ ಸಿದ್ಧತೆ:ಭಕ್ತರ ಅನುಕೂಲಕ್ಕಾಗಿ ಜಿಲ್ಲಾಡಳಿತ ಮತ್ತು ದೇವಸ್ಥಾನ ಆಡಳಿತ ಮಂಡಳಿ ಅಚ್ಚುಕಟ್ಟಾದ ಸಿದ್ಧತೆಗಳನ್ನು ಮಾಡಿತ್ತು. ಬೆಟ್ಟದ ತಪ್ಪಲಿನಿಂದ ದೇಗುಲದವರೆಗೆ ಕುಡಿಯುವ ನೀರಿನ ವ್ಯವಸ್ಥೆ, ತಾತ್ಕಾಲಿಕ ಶೌಚಾಲಯಗಳು, ಪ್ರಸಾದ ವಿತರಣಾ ಕೇಂದ್ರಗಳು, ವೈದ್ಯಕೀಯ ತುರ್ತು ಸೇವಾ ಘಟಕಗಳನ್ನು ಸ್ಥಾಪಿಸಲಾಗಿತ್ತು. ಹಿರಿಯ ನಾಗರಿಕರು ಮತ್ತು ಅಂಗವಿಕಲರಿಗೆ ಪ್ರತ್ಯೇಕ ಸರತಿ ಸಾಲು ವ್ಯವಸ್ಥೆ ಮಾಡಲಾಗಿತ್ತು.

ನೂಕು-ನುಗ್ಗಲು ಉಂಟಾಗದಂತೆ ಪೊಲೀಸ್ ಇಲಾಖೆ ಬಿಗಿ ಬಂದೋಬಸ್ತ್ ಮಾಡಿತ್ತು. ಡ್ರೋನ್ ಕ್ಯಾಮೆರಾಗಳ ಮೂಲಕ ಭದ್ರತಾ ವ್ಯವಸ್ಥೆಯನ್ನು ಮೇಲ್ವಿಚಾರಣೆ ಮಾಡಲಾಯಿತು. 500ಕ್ಕೂ ಹೆಚ್ಚು ಪೊಲೀಸರು, ಹೋಂ ಗಾರ್ಡ್‌ಗಳು ಮತ್ತು ಸ್ವಯಂಸೇವಕರು ಭಕ್ತರಿಗೆ ಮಾರ್ಗದರ್ಶನ ನೀಡಿದರು. ವಾಹನ ನಿಲುಗಡೆಗೆ ಪ್ರತ್ಯೇಕ ಸ್ಥಳಗಳನ್ನು ಗುರುತಿಸಲಾಗಿತ್ತು. ಕೆ.ಎಸ್.ಆರ್.ಟಿ.ಸಿ ಕೂಡ ಹೆಚ್ಚುವರಿ ಬಸ್‌ಗಳನ್ನು ಓಡಿಸಿತು.

ಭಕ್ತರ ಭಾವನೆ:ಮೈಸೂರು ಮಾತ್ರವಲ್ಲ, ರಾಜ್ಯದ ವಿವಿಧ ಜಿಲ್ಲೆಗಳಿಂದ, ನೆರೆಯ ತಮಿಳುನಾಡು, ಕೇರಳ ಮತ್ತು ಆಂಧ್ರದಿಂದಲೂ ಭಕ್ತರು ಆಗಮಿಸಿದ್ದರು. "ಪ್ರತಿ ವರ್ಷ ಆಷಾಡ ಮೊದಲ ಶುಕ್ರವಾರ ತಾಯಿ ದರ್ಶನಕ್ಕೆ ಬರುತ್ತೇವೆ. ತಾಯಿ ಎಲ್ಲರಿಗೂ ಒಳ್ಳೆಯದು ಮಾಡಲಿ" ಎಂದು ಬೆಂಗಳೂರಿನಿಂದ ಬಂದಿದ್ದ ಲಕ್ಷ್ಮಿ ಎಂಬ ಭಕ್ತೆ ತಿಳಿಸಿದರು.

ದೇಗುಲದ ಸುತ್ತಮುತ್ತ ಹೂವು, ಪ್ರಸಾದ, ಪೂಜಾ ಸಾಮಗ್ರಿ ಮಾರಾಟ ಮಾಡುವ ಅಂಗಡಿಗಳು ಕೂಡ ತುಂಬಿ ತುಳುಕುತ್ತಿದ್ದವು. ಸ್ಥಳೀಯ ವ್ಯಾಪಾರಿಗಳಿಗೆ ಇದು ಉತ್ತಮ ವ್ಯಾಪಾರದ ದಿನವೂ ಆಗಿತ್ತು.

ರಾತ್ರಿಯವರೆಗೂ ದರ್ಶನ: ಭಕ್ತರ ಸಂಖ್ಯೆ ಹೆಚ್ಚಿರುವುದನ್ನು ಗಮನಿಸಿ ದೇವಸ್ಥಾನ ಆಡಳಿತ ಮಂಡಳಿ ಇಂದು ರಾತ್ರಿ 10 ಗಂಟೆಯವರೆಗೂ ದರ್ಶನಕ್ಕೆ ಅವಕಾಶ ನೀಡಿದೆ. ಸಂಜೆ ಮಹಾಮಂಗಳಾರತಿ ಮತ್ತು ವಿಶೇಷ ಅಲಂಕಾರದ ನಂತರವೂ ಭಕ್ತರು ತಾಯಿಯನ್ನು ಕಣ್ತುಂಬಿಕೊಳ್ಳಬಹುದು.

ಒಟ್ಟಾರೆಯಾಗಿ ಆಷಾಡ ಮೊದಲ ಶುಕ್ರವಾರ ಚಾಮುಂಡಿ ಬೆಟ್ಟ ಭಕ್ತಿ, ಶ್ರದ್ಧೆ ಮತ್ತು ಸಂಭ್ರಮದಿಂದ ಕೂಡಿತ್ತು. ಜಿಲ್ಲಾಡಳಿತದ ಸಮರ್ಪಕ ವ್ಯವಸ್ಥೆಯಿಂದ ಯಾವುದೇ ಅಹಿತಕರ ಘಟನೆ ನಡೆಯಲಿಲ್ಲ ಎಂದು ಅಧಿಕಾರಿಗಳು ತಿಳಿಸಿದರು.

# ಪಂಚಗ್ಯಾರಂಟಿ ಯೋಜನೆಗಳ ಲಾಭ ಅರ್ಹರಿಗೆ ತಲುಪಲಿ: ಶ್ರೇಣಿಕ್ ಕುಮಾರ್ ಧೋಕಾ




**ಯಾದಗಿರಿ:ಜು.17:** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಪಂಚಗ್ಯಾರಂಟಿ ಯೋಜನೆಗಳ ಸೌಲಭ್ಯಗಳು ನಿಜವಾದ ಅರ್ಹ ಫಲಾನುಭವಿಗಳಿಗೆ ತಲುಪುವಂತೆ ಅಧಿಕಾರಿಗಳು ಕಟ್ಟುನಿಟ್ಟಾಗಿ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಶ್ರೇಣಿಕ್ ಕುಮಾರ್ ಧೋಕಾ ಸೂಚಿಸಿದರು.ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರ ನಡೆದ ಪಂಚಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಪಂಚಗ್ಯಾರಂಟಿ ಯೋಜನೆಗಳ ಲಾಭ ಅರ್ಹರಿಗೆ ಮಾತ್ರ ದೊರೆಯಬೇಕು. ಅನರ್ಹರು ಯಾವುದೇ ರೀತಿಯಲ್ಲಿ ಯೋಜನೆಗಳ ದುರುಪಯೋಗಪಡಿಸಿಕೊಳ್ಳದಂತೆ ಅಧಿಕಾರಿಗಳು ನಿಗಾ ವಹಿಸಬೇಕು ಎಂದು ನಿರ್ದೇಶನ ನೀಡಿದರು. ಜಿಲ್ಲೆಯಲ್ಲಿ ಗೃಹಲಕ್ಷ್ಮಿ ಹಾಗೂ ಅನ್ನಭಾಗ್ಯ ಯೋಜನೆಗಳ ಫಲಾನುಭವಿಗಳಲ್ಲಿ ಮೃತಪಟ್ಟಿರುವವರ ಸಂಪೂರ್ಣ ಮಾಹಿತಿಯನ್ನು ಸಂಗ್ರಹಿಸಿ ವರದಿ ಸಲ್ಲಿಸಬೇಕು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಆಹಾರ ಇಲಾಖೆಯ ಅಧಿಕಾರಿಗಳು ಪರಸ್ಪರ ಸಮನ್ವಯದೊಂದಿಗೆ ಮಾಹಿತಿ ವಿನಿಮಯ ಮಾಡಿಕೊಂಡು ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಗೃಹಜ್ಯೋತಿ ಯೋಜನೆಯ ಲಾಭವನ್ನು ಅನರ್ಹರು ಪಡೆಯದಂತೆ ತಡೆಯಲು ಜೆಸ್ಕಾಂ ವತಿಯಿಂದ ಸರ್ವೆ ಕಾರ್ಯ ನಡೆಯುತ್ತಿದೆ. ಕರ್ನಾಟಕದ ಅರ್ಹ ಫಲಾನುಭವಿಗಳು ಮಾತ್ರ ಯೋಜನೆಯ ಪ್ರಯೋಜನ ಪಡೆಯುವ ಉದ್ದೇಶದಿಂದ ಸಾಮಾಜಿಕ ಹಾಗೂ ಅಧಿಕೃತ ದಾಖಲೆಗಳ ಪರಿಶೀಲನೆ ನಡೆಸಲಾಗುತ್ತಿದೆ. ಇದಕ್ಕೆ ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ ಎಂದು ಹೇಳಿದರು.ಸರ್ವೆ ವೇಳೆ ಅಧಿಕಾರಿಗಳಿಗೆ ಆಧಾರ್ ಕಾರ್ಡ್, ಮತದಾರರ ಗುರುತಿನ ಚೀಟಿ, ಆದಾಯ ತೆರಿಗೆ ಗುರುತಿನ ಸಂಖ್ಯೆ ಸೇರಿದಂತೆ ಅಗತ್ಯ ದಾಖಲೆಗಳನ್ನು ನೀಡಿ ಸಹಕರಿಸುವಂತೆ ಸಾರ್ವಜನಿಕರಿಗೆ ಮನವಿ ಮಾಡಿದರು. ಮೃತ ಫಲಾನುಭವಿಗಳ ಮರಣ ಪ್ರಮಾಣ ಪತ್ರ, ಬ್ಯಾಂಕ್ ಖಾತೆಗಳ ಮಾಹಿತಿ, ಅನರ್ಹ ಫಲಾನುಭವಿಗಳಿಂದ ಮರುಪಾವತಿ (ರಿಕವರಿ) ಸೇರಿದಂತೆ ಸಮಗ್ರ ಮಾಹಿತಿಯನ್ನು ಅಧಿಕಾರಿಗಳು ಸಲ್ಲಿಸಬೇಕು. ಜೆಸ್ಕಾಂ ಸರ್ವೆ ಕುರಿತು ಗ್ರಾಮವಾರು ಡಂಗುರ ಹಾಗೂ ಇತರೆ ಜಾಗೃತಿ ಮಾಧ್ಯಮಗಳ ಮೂಲಕ ಸಾರ್ವಜನಿಕರಿಗೆ ಮಾಹಿತಿ ನೀಡುವಂತೆ ಸೂಚಿಸಿದರು.ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷರಾದ ರಮೇಶ್ ದೊರೆ, ಹಣಮಂತ ಕಾನಳ್ಳಿ, ಬಸವರಾಜ ಬಿಳ್ಹಾರ್, ಹಳ್ಳೆಪ್ಪ ಹವಾಲ್ದಾರ್, ಸ್ಯಾಮ್ಸನ್ ಮಾಳಿಕೇರಿ, ತಾಲೂಕು ಅಧ್ಯಕ್ಷರಾದ ಬಸವರಾಜಪ್ಪ ಬಾಗಲಿ, ಬೀರಲಿಂಗಪ್ಪ ಬಾದ್ಯಾಪುರ, ಕೃಷ್ಣ ಜಾಧವ್, ಖಾಜಾ ಮೈನುದ್ದೀನ್, ಲಕ್ಷ್ಮೀಕಾಂತ ರೆಡ್ಡಿ ಪಲ್ಲಾ, ಸಮಿತಿ ಸದಸ್ಯರು, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಹಾಗೂ ನೋಡಲ್ ಅಧಿಕಾರಿ ವಿಜಯಕುಮಾರ್ ಮಡ್ಡೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಟ್ರಂಪ್ ಹತ್ಯೆ ಮಾಡಿದವರಿಗೆ 10 ಮಿಲಿಯನ್ ಡಾಲರ್ ಬಹುಮಾನ: ಇರಾನ್ ಸಶಸ್ತ್ರ ಗುಂಪು ಘೋಷಣೆ



**ಟೆಹ್ರಾನ್, ಜು.17–**ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕೊಲ್ಲುವವರಿಗೆ 10 ಮಿಲಿಯನ್ ಡಾಲರ್ ಬಹುಮಾನ ನೀಡುವುದಾಗಿ ಇರಾನ್ ಸಶಸ್ತ್ರ ಗುಂಪು ಘೋಷಿಸಿದೆ.

ತನ್ನನ್ನು ಇಸ್ಲಾಮಿಕ್ ರೆಸಿಸ್ಟೆನ್ಸ್ ಇರಾಕ್ ಎಂದು ಗುರುತಿಸಿಕೊಂಡಿರುವ ಈ ಗುಂಪು ಜುಲೈ 16 ರಂದು ಈ ಪ್ರಕಟಣೆ ಹೊರಡಿಸಿರುವುದನ್ನು ಉಲ್ಲೇಖಿಸಿ ಖಾಸಗಿ ಚಾನಲ್ ವರದಿ ಮಾಡಿದೆ

ಈ ಘೋಷಣೆ 2020ರಲ್ಲಿ ಬಾಗ್ದಾದ್‌ನಲ್ಲಿ ನಡೆದ ಅಮೆರಿಕದ ಡ್ರೋನ್ ದಾಳಿಯಲ್ಲಿ ಇರಾನ್‌ನ ಜನರಲ್ ಖಾಸಿಂ ಸುಲೈಮಾನಿ ಮತ್ತು ಇರಾಕಿನ ಮಿಲಿಷಿಯಾ ನಾಯಕ ಅಬು ಮಹ್ದಿ ಅಲ್–ಮುಹಂದಿಸ್ ಮೃತಪಟ್ಟ ಘಟನೆಯ ಪ್ರತೀಕಾರವಾಗಿ ಈ ಘೋಷಣೆ ಮಾಡಲಾಗಿದೆ ಎಂದು ಸಂಘಟನೆ ಹೇಳಿದೆ.

ಟ್ರಂಪ್ ಅವರನ್ನೇ ಆ ಸಾವಿಗೆ ಹೊಣೆಗಾರರೆಂದು ಆರೋಪಿಸಿ, ತನ್ನ ಹೇಳಿಕೆಯಲ್ಲಿ ಧಾರ್ಮಿಕ ಮತ್ತು ರಾಜಕೀಯ ಉಲ್ಲೇಖಗಳನ್ನು ಬಳಸಿದೆ.

ಮುಖ್ಯವಾಗಿ, ಈ ದಾವೆಯನ್ನು ಸ್ವತಂತ್ರ ಮೂಲಗಳಿಂದ ದೃಢೀಕರಿಸಲಾಗಿಲ್ಲ.

ಸಾಮಾನ್ಯವಾಗಿ, ಪ್ರಸ್ತುತ ಅಥವಾ ಮಾಜಿ ರಾಷ್ಟ್ರ ಮುಖ್ಯಸ್ಥರ ವಿರುದ್ಧದ ಸಾರ್ವಜನಿಕ ಬೆದರಿಕೆಗಳನ್ನು ಅಮೆರಿಕದ ಭದ್ರತಾ ಮತ್ತು ಕಾನೂನು ಜಾರಿ ಸಂಸ್ಥೆಗಳು ಗಂಭೀರವಾಗಿ ಪರಿಗಣಿಸಿ ಪರಿಶೀಲಿಸುತ್ತವೆ. ಆದರೆ ಅಮೆರಿಕದ ಅಧಿಕಾರಿಗಳಿಂದ ಈ ಬಗ್ಗೆ ಯಾವುದೇ ಅಧಿಕೃತ ಪ್ರತಿಕ್ರಿಯೆ ಹೊರ ಬಂದಿಲ್ಲ

ಕುರಾನ್ ವಚನ ಉಲ್ಲೇಖ

ಈ ಗುಂಪು ಇಸ್ಲಾಮಿಕ್ ಪ್ರಾರ್ಥನೆಯಾದ ಪರಮ ದಯಾಮಯಿ ಕರುಣಾ ಮಯನೂ ಆದ ಅಲ್ಲಾಹನ ಹೆಸರಿನಲ್ಲಿ ಎಂಬ ಸಾಲುಗಳೊಂದಿಗೆ ಪ್ರಾರಂಭಿಸಿದೆ. ಕುರಾನ್ ನ ಒಂದು ವಚನವನ್ನು ಪ್ರಕಟಣೆಯಲ್ಲಿ ಉಲ್ಲೇಖಿಸಲಾಗಿದೆ. ನ್ಯಾಯಯುತ ಪ್ರತೀಕಾರಗಳಿಂದ ಮುಗ್ಧ ಜೀವಗಳನ್ನು ಉಳಿಸಬಹುದು. ಇದರಿಂದ ನೀವಯ ಧರ್ಮ ನಿಷ್ಠರಾಗಬಹುದು ಎಂದು ತಿಳಿಸಿದೆ.

ಅಮೆರಿಕ ಕನ್ಸ್ ಸರ್ವೇಟಿವ್ ಪಕ್ಷದ ಕಾರ್ಯಕರ್ತೆ ಲಾರಾ ಲೂಮರ್, ಈ ವರದಿಗಳನ್ನು ಟೀಕಿಸಿದ್ದಾರೆ.

ಟ್ರಂಪ್ ಅವರ ಹತ್ಯೆಗಾಗಿ,ಇಸ್ಲಾಮಿಕ್ ರೆಸಿಸ್ಟೆನ್ಸ್ ಘೋಷಿಸಿರುವ 10 ಮಿಲಿಯನ್ ಡಾಲರ್ ಬಹುಮಾನದ ಸುದ್ದಿಯನ್ನು ರಷ್ಯಾದ ಸರ್ಕಾರಿ ಮಾಧ್ಯಮಗಳು ಪ್ರಚಾರ ಮಾಡುತ್ತಿವೆ ಎಂದು ಸಾಮಾಜಿಕ ಜಾಲ ತಾಣ ಎಕ್ಸ್ ನಲ್ಲಿ ಬರೆದುಕೊಂಡಿದ್ದಾರೆ.

# ವಾಂಗ್ಚುಕ್ ಆರೋಗ್ಯ ನಿರ್ಲಕ್ಷ್ಯ ಖಂಡಿಸಿ ಕೈ ಪ್ರತಿಭಟನೆ




**ಬೆಂಗಳೂರು, ಜು. 17–** ವಿದ್ಯಾರ್ಥಿಗಳ ಭವಿಷ್ಯವನ್ನು ಹಾಳು ಮಾಡುತ್ತಿರುವ ನಿರಂತರ ಪರೀಕ್ಷಾ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳು ಹಾಗೂ ವಿದ್ಯಾರ್ಥಿಗಳ ಪರವಾಗಿ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ವಿಜ್ಞಾನಿ ಸೋನಂ ವಾಂಗ್ಚುಕ್ ಅವರ ಆರೋಗ್ಯದ ಬಗ್ಗೆ ಕೇಂದ್ರ ಸರ್ಕಾರ ತಾಳಿರುವ ನಿರ್ಲಕ್ಷ್ಯ ಧೋರಣೆಯನ್ನು ಖಂಡಿಸಿ, ಇಂದು ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಸ್. ಮನೋಹರ್, ದೇಶದಲ್ಲಿ ಪದೇ ಪದೇ ನಡೆಯುತ್ತಿರುವ ಪರೀಕ್ಷಾ ಪ್ರಶ್ನೆಪತ್ರಿಕೆ ಸೋರಿಕೆಗಳು ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ, ಪರಿಶ್ರಮ ಮತ್ತು ಆತ್ಮವಿಶ್ವಾಸವನ್ನು ಹಾಳು ಮಾಡಿವೆ. ಈ ವೈಫಲ್ಯದ ಸಂಪೂರ್ಣ ನೈತಿಕ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ಅವರು ತಕ್ಷಣವೇ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

ವಿದ್ಯಾರ್ಥಿಗಳಿಗೆ ಪಾರದರ್ಶಕ, ನ್ಯಾಯಸಮ್ಮತ ಮತ್ತು ವಿಶ್ವಾಸಾರ್ಹ ಪರೀಕ್ಷಾ ವ್ಯವಸ್ಥೆಯನ್ನು ಒದಗಿಸುವಲ್ಲಿ ಕೇಂದ್ರ ಸರ್ಕಾರ ಸಂಪೂರ್ಣ ವಿಫಲವಾಗಿದೆ. ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳ ಕುರಿತು ಸಮಗ್ರ, ನಿಷ್ಪಕ್ಷಪಾತ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ವಿದ್ಯಾರ್ಥಿಗಳ ಹಿತಾಸಕ್ತಿಗಾಗಿ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ವಿಜ್ಞಾನಿ ಸೋನಂ ವಾಂಗ್ಚುಕ್ ಅವರ ಹೋರಾಟವು ದೇಶದ ವಿದ್ಯಾರ್ಥಿಗಳು ಹಾಗೂ ನಾಗರಿಕರ ಆತಂಕವನ್ನು ಪ್ರತಿಬಿಂಬಿಸುತ್ತದೆ. ಕೇಂದ್ರ ಸರ್ಕಾರ ಮೌನ ವಹಿಸುವ ಬದಲು ಅವರೊಂದಿಗೆ ಪ್ರಜಾಪ್ರಭುತ್ವದ ರೀತಿಯಲ್ಲಿ ರಚನಾತ್ಮಕ ಸಂವಾದ ನಡೆಸಬೇಕು ಎಂದು ಹೇಳಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ತಕ್ಷಣವೇ ಮಧ್ಯಪ್ರವೇಶಿಸಿ, ಸೋನಂ ವಾಂಗ್ಚುಕ್ ಅವರ ಜೀವ ರಕ್ಷಿಸಲು ಅಗತ್ಯ ಕ್ರಮ ಕೈಗೊಂಡು, ಅವರು ಎತ್ತಿರುವ ವಿಷಯಗಳ ಕುರಿತು ಪ್ರಜಾಪ್ರಭುತ್ವದ

ಚರ್ಚೆ ಆರಂಭಿಸಬೇಕು. ಶಾಂತಿಯುತ ವಾಗಿ ಪ್ರತಿಭಟನೆ ನಡೆಸುವವರ ಧ್ವನಿಯನ್ನು ಆಲಿಸುವುದೇ ಪ್ರಜಾಪ್ರಭುತ್ವದ ನಿಜವಾದ ಮೌಲ್ಯ ಎಂದು ಎಸ್. ಮನೋಹರ್ ಅಭಿಪ್ರಾಯಪಟ್ಟರು.

ಈ ಹಿನ್ನೆಲೆಯಲ್ಲಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ಅವರು ರಾಜೀನಾಮೆ ನೀಡಬೇಕು ಹಾಗೂ ವಿದ್ಯಾರ್ಥಿಗಳ ಹಿತಾಸಕ್ತಿಯ ವಿಚಾರದಲ್ಲಿ ಕೇಂದ್ರ ಸರ್ಕಾರ ಉತ್ತರದಾಯಿತ್ವ ವಹಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಹಲವಾರು ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಭಾಗವಹಿಸಿದ್ದರು.

## ಸಾರಾ.ಮಹೇಶ್ 2023ರ ಚುನಾವಣೆಯಲ್ಲಿ ಹೀನಾಯ ಸೋಲಿನ ಹತಾಶೆಯಿಂದ ಮನಬಂದಂತೆ ಮಾತನಾಡುತ್ತಿದ್ದಾರೆ



**ಕೆ.ಆರ್.ನಗರ,ಜು.17:–** ಮಾಜಿ ಸಚಿವ ಸಾ.ರಾ.ಮಹೇಶ್ ಶಾಸಕರಾಗಿ, ಸಚಿವರಾಗಿ ಕೆಲಸ ಮಾಡಿದರು ಕೂಡ ಅವರ ನಡವಳಿಕೆ ಬದಲಾವಣೆ ಆಗಿಲ್ಲ ಈಗಲ್ಲೂ ಪುಡಿ ರೌಡಿಯಂತೆ ಮಾತನಾಡುತ್ತಿದ್ದಾರೆ ಎಂದು ತಾಲೂಕು ಕಾಂಗ್ರೆಸ್ ವಕ್ತಾರ್ ಸೈಯದ್ ಜಾಬೀರ್ ಆರೋಪಿಸಿದ್ದಾರೆ. ಕ್ರೈಂಸುದ್ದಿ

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು 2023ರ ವಿಧಾನ ಸಭೆಯ ಹೀನಾಯ ಸೋಲಿನ ಹತಾಶೆಯಿಂದ ಮನಬಂದಂತೆ ಮಾತನಾಡುತ್ತಿದ್ದಾರೆ ಎಂದು ಹೇಳಿರುವ ವಕ್ತಾರರು ವೇದಿಕೆಯಲ್ಲಿ ತಮ್ಮ ನಾಯಕರನ್ನು ಮೆಚ್ಚಿಸಿಕೊಳ್ಳುವ ಸಲುವಾಗಿ ಅಧಿಕಾರಿಗಳಿಗೆ ಧಮಕಿ ಹಾಕುತ್ತಿದ್ದಾರೆ ಎಂದು ಹೇಳಿದ್ದಾರೆ.

27 ಸಾವಿರ ಮತಗಳ ಅಂತರ ದಿಂದ ಜಯಗಳಿಸಿರುವ ಶಾಸಕ ಡಿ.ರವಿಶಂಕರ್ ಗೆಲುವಿನ ಬಗ್ಗೆ ಲಾಟರಿ ಗೆಲುವು ಎಂಬ ಪದ ಬಳಸಿ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನ ಮಾಡಿರುವ ಜನತೆಗೆ ಅಪಮಾನ ಮಾಡುತ್ತಿದ್ದಾರೆ ಎಂದು ದೂರಿದ್ದಾರೆ.

ರಾಜ್ಯ ಸರ್ಕಾರದ ಗೃಹ ಮಂತ್ರಿಗೂ ಕಾನೂನಿನ ಪಾಠ ಮಾಡುವಷ್ಟು ದೊಡ್ಡವರಾಗಿರುವ ಸಾ.ರಾ.ಮಹೇಶ್ ಕೆ.ಆರ್.ನಗರ ವಿಧಾನ ಸಭಾ ಕ್ಷೇತ್ರಕ್ಕೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಕರೆತರುವಾಗ ಶಿಷ್ಟಚಾರದಂತೆ ಶಾಸಕರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ಮಾಡಬೇಕೆಂಬ ಪರಿಜ್ಞಾನ ಇಲ್ಲವೆಂದು ಪ್ರಶ್ನಿಸಿದ್ದಾರೆ.

ಇಂದಿರಾ ಗಾಂಧಿ ವಸತಿ ಶಾಲೆಯ ಕಟ್ಟಡವನ್ನು ಮಿರ್ಲೆ ಹೋಬಳಿಯ ಕುಪ್ಪಳ್ಳಿ ಗ್ರಾಮದಲ್ಲಿ ನಿರ್ಮಾಣ ಮಾಡಬೇಕು ಇದಕ್ಕೆ ಶಾಸಕರು ಬದ್ದರಾಗಿದ್ದಾರೆ ಆದರೆ ಅರಣ್ಯ ಇಲಾಖೆಯಿಂದ ಅನುಮತಿ ಸಿಗದ ಕಾರಣ ಸೂಕ್ತ ಜಾಗ ಗುರುತಿಸಲು ಸಾಧ್ಯವಾಗಿಲ್ಲ ಈ ವಿಚಾರವನ್ನು ಮಾಜಿ ಸಚಿವರಾದ ನೀವು ಅರಿಯದೇ ಆ ಭಾಗದ ಜನತೆಯನ್ನು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತೀದ್ದಿರಿ ಎಂದು ಆರೋಪಿಸಿದ್ದಾರೆ.

ಕುಪ್ಪಳ್ಳಿಯಲ್ಲಿ ವಸತಿ ಶಾಲೆ ನಿರ್ಮಾಣ ಮಾಡಲು ಆಸಕ್ತಿ ತೋರುವ ತೋರುವ ನೀವು ಸಾಲಿಗ್ರಾಮ ತಾಲೂಕು ಕೇಂದ್ರದಲ್ಲಿ ಸಾರ್ವಜನಿಕ ಆಸ್ಪತ್ರೆ ಕಟ್ಟಡ ನಿರ್ಮಾಣಕ್ಕೆ ಮತ್ತು ಮಿನಿ ವಿಧಾನ ಸೌಧ ನಿರ್ಮಾಣ ಮಾಡಲು ಏಕೆ ಸಹಕಾರ ನೀಡುತ್ತಿಲ್ಲ ಎಂದರು.

# ತಾಳಿಕೋಟೆಯಲ್ಲಿ ರೈತ ಸಂಘದಿಂದ ಬೃಹತ್ ಪ್ರತಿಭಟನೆ



**ತಾಳಿಕೋಟೆ:ಜು.17:** ಬೂದಿಹಾಳ– ಪೀರಾಪೂರ ಏತ ನೀರಾವರಿ ಯೋಜನೆ ಸಂಪೂರ್ಣ ಅನುಷ್ಠಾನಗೊಳಿಸುವುದು ವಿಜಯಪುರ ಜಿಲ್ಲೆ ಬರಪೀಡಿತ ಜಿಲ್ಲೆ ಎಂದು ಘೋಷಿಸಬೇಕು ಸೇರಿದಂತೆ ರೈತರ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಶ್ರೀ ಖಾಸ್ಗತೇಶ್ವರ ಮಠದ ಬಾಲಶಿವಯೋಗಿ ಶ್ರೀ ಸಿದ್ದಲಿಂಗ ದೇವರ ನೇತೃತ್ವದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ(ವಾಸುದೇವ ಮೇಟಿ ಬಣ) ತಾಲೂಕ ಘಟಕದ ನೇತೃತ್ವದಲ್ಲಿ ರೈತರು ಪಟ್ಟಣದಲ್ಲಿ ಗುರುವಾರರಂದು ಬೃಹತ್ ಪ್ರತಿಭಟನೆ ನಡೆಸಿದರು.

ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿ ನೂರಾರು ಸಂಖ್ಯೆಯಲ್ಲಿ ಸೇರಿದ ತಾಳಿಕೋಟೆ ತಾಲೂಕಿನ ಹಾಗೂ ಸುರಪೂರ ಭಾಗದ ರೈತರ ಪ್ರತಿಭಟನಾ ಮೆರವಣಿಗೆಗೆ ಶ್ರೀ ಖಾಸ್ಗತೇಶ್ವರ ಮಠದ ಪರಮ ಪೂಜ್ಯ ಸಿದ್ದಲಿಂಗ ದೇವರು ಚಾಲನೆ ನೀಡಿ ಆಶೀರ್ವಚನ ನೀಡಿದರು. ಅಲ್ಲಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆಯು ಕತ್ರಿ ಬಜಾರ್, ಶಿವಾಜಿ ಸರ್ಕಲ್, ಮಹಾರಾಣಾ ಪ್ರತಾಪ್ ಸಿಂಹ ಸರ್ಕಲ್ ಹಾಗೂ ಬಸ್ ನಿಲ್ದಾಣ ಮಾರ್ಗವಾಗಿ ಶ್ರೀ ಬಸವೇಶ್ವರ ವೃತ್ತಕ್ಕೆ ತಲುಪಿ ಅಲ್ಲಿ ಮಾನವ ಸರ್ಪಳಿ ನಿರ್ಮಿಸಿ ಕೆಲ ಹೊತ್ತು ರಸ್ತೆ ತಡೆ ನಡೆಸಿ ಯೋಜನೆ ವಿಳಂಬ ಖಂಡಿಸಿ ಧಿಕ್ಕಾರ ಕೂಗಿದರು.

ನಂತರ ಅಲ್ಲಿ ಸಮಾವೇಶಗೊಂಡ ನೂರಾರು ರೈತರನ್ನು ಉದ್ದೇಶಿಸಿ ಕರ್ನಾಟಕ ರಾಜ್ಯ ರೈತ ಸಂಘ ಯಾದಗಿರಿ ಜಿಲ್ಲಾ ಅಧ್ಯಕ್ಷ ಮಲ್ಲನಗೌಡ ಹಗರಟಗಿ ಮಾತನಾಡಿ ಸುಮಾರು 935 ಕೋಟಿ ವೆಚ್ಚದ ಈ ನೀರಾವರಿ ಯೋಜನೆ ಮುಕ್ತಾಯ ಹಂತಕ್ಕೆ ಬಂದಿದೆ ಇನ್ನು 160 ಕೋಟಿ ಅನುದಾನದಲ್ಲಿ ಪೂರ್ಣಗೊಳ್ಳಲಿದೆ ಆದರೆ ಜನಪ್ರತಿನಿಧಿಗಳು ಇದಕ್ಕೆ ಇಚ್ಛಾ ಶಕ್ತಿ ತೋರುತ್ತಿಲ್ಲ. ಇದರ ಜೊತೆಗೆ ಈ ಭಾಗದ ರೈತರಿಗೆ ಬೆಳೆ ವಿಮೆ ಪರಿಹಾರ ಸಮರ್ಪಕವಾಗಿ ಸಿಕ್ಕಿಲ್ಲ ಇದರಿಂದ ರೈತರಿಗೆ ಸಾಕಷ್ಟು ತೊಂದರೆಯಾಗುತ್ತಿದೆ ಪರಿಸ್ಥಿತಿ ಹೀಗಿಯೇ ಮುಂದುವರೆದರೆ ಇದಕ್ಕಿಂತಲೂ ಉಗ್ರವಾದ ಹೋರಾಟವನ್ನು ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಬಿಜೆಪಿ ಮುಖಂಡ ಬಸನಗೌಡ ಪಾಟೀಲ ಎಡೆಯಾಪೂರ ಮಾತನಾಡಿ ಈ ಯೋಜನೆ ಕೆಲವು ತಾಂತ್ರಿಕ ಕಾರಣಗಳಿಂದ ಪೂರ್ಣಗೊಳ್ಳುತ್ತಿಲ್ಲ ಇದಕ್ಕೆ ಕೆಬಿಜೆಎನ್ ಎಲ್ ಅಧಿಕಾರಿಗಳು ಆಸಕ್ತಿ ವಹಿಸಿ ಕೆಲಸ ಮಾಡಬೇಕಾಗಿದೆ ಎಂದರು.

ಮಾಜಿ ಶಾಸಕ ಸೋಮನಗೌಡ ಪಾಟೀಲ ಮಾತನಾಡಿ ನನ್ನ ಶಾಸಕತ್ವದ ಅವಧಿಯಲ್ಲಿ ನಾನು ಸಾಕಷ್ಟು ಪ್ರಯತ್ನ ಮಾಡಿ ಈ ಯೋಜನೆಯನ್ನು ತಂದಿದ್ದೇನೆ ಆದರೆ ಇವತ್ತು ಅದನ್ನು ಪೂರ್ಣಗೊಳಿಸಲು ಪ್ರಯತ್ನ ಮಾಡದೇ ಇರುವುದರಿಂದ ರೈತರಿಗೆ ಸಾಕಷ್ಟು ತೊಂದರೆಯಾಗುತ್ತಿದೆ ಪರಿಸ್ಥಿತಿ ಹೀಗೆಯೇ ಮುಂದುವರೆದಲ್ಲಿ ಹೋರಾಟವನ್ನು ಇನ್ನಷ್ಟು ತೀವ್ರಗೊಳಿಸುವುದು ಅನಿವಾರ್ಯವಾಗುತ್ತದೆ ಎಂದರು.

ರೈತರ ನಾನಾ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಮುಖ್ಯಮಂತ್ರಿ ಹಾಗೂ ನೀರಾವರಿ ಸಚಿವರಿಗೆ ಪ್ರತ್ಯೇಕವಾಗಿ ಬರೆದ ಮನವಿಗಳನ್ನು ತಹಶೀಲ್ದಾರ್ ಡಾ.ವಿನಯಾ ಹೂಗಾರ ಅವರಿಗೆ ಸಲ್ಲಿಸಲಾಯಿತು.

ಪ್ರತಿಭಟನಾ ಮೆರವಣಿಗೆಯಲ್ಲಿ ಬಿಜೆಪಿ ಮಾಜಿ ಜಿಲ್ಲಾ ಅಧ್ಯಕ್ಷ ಆರ್.ಎಸ್.ಪಾಟೀಲ(ಕೂಚಬಾಳ), ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಾಲೂಕ ಅಧ್ಯಕ್ಷ ರಾಜುಗೌಡ ಅನಂತ ರೆಡ್ಡಿ, ಜಿಲ್ಲಾ ಉಪಾಧ್ಯಕ್ಷ ಬಸನಗೌಡ ಮಾಲಿಪಾಟೀಲ, ಗುಲ್ಬರ್ಗ ಜಿಲ್ಲಾ ಅಧ್ಯಕ್ಷ ಶಾಂತಗೌಡ ಮಾಲಿಪಾಟೀಲ, ರೈತ ಮುಖಂಡರಾದ ಸಂಗನಗೌಡ ಹೆಗರೆಡ್ಡಿ, ಸಿದ್ದು ಬುಳ್ಳಾ, ಮಲ್ಲನಗೌಡ ಪೊಲೀಸ್ ಪಾಟೀಲ, ರಾಜುಗೌಡ ಕೋಳೂರ, ಸುರೇಶಕುಮಾರ ಇಂಗಳಗಿ, ಪ್ರಭುಗೌಡ ನಾಡಗೌಡ ಸೇರಿದಂತೆ ನೂರಾರು ರೈತರು ಭಾಗವಹಿಸಿದ್ದರು.

ಮುನ್ನೆಚ್ಚರಿಕೆ ಕ್ರಮವಾಗಿ ಸಿಪಿಐ ಮೊಹಮ್ಮದ್ ಫಸಿಯುದ್ದೀನ, ಪಿಎಸ್ಐ ಜ್ಯೋತಿ ಖೋತ್ ನೇತೃತ್ವದಲ್ಲಿ ಪೊಲೀಸ್ ಇಲಾಖೆ ಅಗತ್ಯ ಬಂದೋಬಸ್ತ್ ಕೈಗೊಂಡಿತ್ತು.

ಬೂದಿಹಾಳ–ಫೀರಾಪೂರ ಏತನೀರಾವರಿ ಯೋಜನೆಯ ಅನುಷ್ಠಾನಕ್ಕೆ 935 ಕೋಟಿ ಅನುದಾನವನ್ನು ತಂದಿದ್ದೇನೆ ಕಾಮಗಾರಿ ಮುಕ್ತಾಯ ಹಂತದಲ್ಲಿದೆ ಕೊನೆಯದಾಗ ಎಫ್ಐಸಿ ಕಾಲುವೆ ನಿರ್ಮಾಣಕ್ಕೆ 160 ಕೋಟಿ ಅನುದಾನ ಬೇಕಿದೆ ಅದು ಸರ್ಕಾರ ನೀಡಲು ಮೀನಮೇಷ ಏಣಿಸುತ್ತಿದೆ ಕೂಡಲೇ ಸರ್ಕಾರದ ಅನುದಾನ ಬಿಡುಗಡೆ ಮಾಡದಿದ್ದಲ್ಲಿ ಯೋಜನೆಗೆ ಬಳಿಸಿದ ಸಾವಿರ ಕೋಟಿ ಹಣ ವ್ಯರ್ಥವಾಗಿ ಹಾಳಾಗಿ ಹೋಗಲಿದೆ.

ಸೋಮನಗೌಡ ಪಾಟೀಲ(ಸಾಸನೂರ)

ಮಾಜಿ ಶಾಸಕರು ದೇ.ಹಿಪ್ಪರಗಿ

# ವಿಶೇಷ ಉಪನ್ಯಾಸ



**ಸತ್ತೂರು,ಜು 17 :** ಸತ್ತೂರಿನ ನಾರಾಯಣ ಪಾರಾಯಣ ಬಳಗದ ಆಶ್ರಯದಲ್ಲಿ, ಉದಯಗಿರಿಯಲ್ಲಿರುವ ಶ್ರೀ ಪ್ರಶಾಂತ ಕುಲಕರ್ಣಿ ಇವರ ನಿವಾಸದಲ್ಲಿ , ಬರುವ ಭಾನುವಾರದಂದು ಅಂದರೆ ದಿನಾಂಕ 19–7–2026 ರಂದು ಬೆಳಿಗ್ಗೆ 8:15 ಕ್ಕೆ "ಆಷಾಢ ಮಾಸದ ವಿಶೇಷತೆಗಳು" ಕುರಿತು ವಿಶೇಷ ಉಪನ್ಯಾಸವನ್ನು ಹಮ್ಮಿಕೊಳ್ಳಲಾಗಿದೆ ಸಂಪನ್ಮೂಲ ವ್ಯಕ್ತಿಗಳಾಗಿ ಪಂ. ಸುಧೀಂದ್ರ ಆಚಾರ್ಯ ಗಿರಿಭಟ್ಟನವರು ಆಗಮಿಸಲಿದ್ದಾರೆ ಎಂದು ಬಳಗದ ಕಾರ್ಯದರ್ಶಿಯಾದ ರಘೋತ್ತಮ ಅವಧಾನಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 63 61 83 57 10 ನ್ನು ಸಂಪರ್ಕಿಸಲು ಕೋರಿಕೆ.

# ಪುಟ್ಟರಾಜ ಗವಾಯಿಗಳು ಸಂಗೀತದ ಸಾಮ್ರಾಟ್: ಉಮಾಶ್ರೀ



**ಕಲಬುರಗಿ:ಜು.17:** ನಾಡಿನ ಪುಟ್ಟರಾಜ ಗವಾಯಿಗಳು ಸಂಗೀತ ಕ್ಷೇತ್ರದ ಸಾಮ್ರಾಟ್ ಆಗಿದ್ದರು ಎಂದು ಚಿತ್ರನಟಿ, ವಿಧಾನ ಪರಿಷತ್ ಸದಸ್ಯ ಉಮಾಶ್ರೀ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಹಾಗೂ ಚಿತ್ತಾಪೂರನ ಶ್ರೀ ರಾಗ ಸಂಗಮ ಸೇವಾ ಟ್ರಸ್ಟ್ ಜಂಟಿ ಆಶ್ರಯದಲ್ಲಿ ನಗರದ ಕನ್ನಡ ಭವನದ ಸುವರ್ಣ ಸಭಾ ಭವನದಲ್ಲಿ ಗುರುವಾರ ಏರ್ಪಡಿಸಿದ ಪುಟ್ಟರಾಜ ಕೊಟ್ಟ ಜ್ಞಾನ ಎಂಬ ಗಾನ ಮಾನ ದಾತ ನಾದದ ನವನೀತ ವಿಶೇಷ ಕಾರ್ಯಕ್ರಮದಲ್ಲಿ ಪ್ರವಚನ ಪ್ರವೀಣ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಅವರು, ಪುಟ್ಟರಾಜ ಕವಿ ಗವಾಯಿಗಳು ನಮಗೆ ಅಂತರಾತ್ಮದ ಶಕ್ತಿ ತುಂಬಿದವರು. ಅವರಲ್ಲಿ ದೈವಿಕ ಶಕ್ತಿಯ ಅಂಶಗಳಿದ್ದವು. ರಂಗಭೂಮಿಗೆ ವೈಭವ ತಂದು ಕೊಟ್ಟವರು. ಹೀಗಾಗಿ ನಾಡಿನ ರಂಗಭೂಮಿ ಕ್ಷೇತ್ರದಲ್ಲಿ ಬಹು ದೊಡ್ಡ ಪಾತ್ರ ನಿರ್ವಹಿಸಿದರು ಎಂದು ಕೆಲ ಘಟನೆಗಳನ್ನು ಸ್ಮರಿಸಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಕಾರ್ಯ ಚಟುವಟಿಕೆಗಳನ್ನು ಉಮಾಶ್ರೀ ಅವರು ಶ್ಲಾಘಿಸಿದರು.

ಸಮಾರಂಭದ ಸಾನಿಧ್ಯ ವಹಿಸಿದ್ದ ಚಿನ್ಮಯಗಿರಿ ಮಹಾಂತೇಶ್ವರ ಮಠದ ಶ್ರೀ ವೀರ ಮಹಾಂತ ಶಿವಾಚಾರ್ಯರು, ನೊಂದ ಮನಸ್ಸುಗಳಿಗೆ ಬೆಳ್ಳಿ ಬಂಗಾರ ಮುಖ್ಯವಲ್ಲ. ಒಳ್ಳೆಯ ಮಾತುಗಳು ನುಡಿಯ ಪ್ರವಚನಕಾರರಿಗೆ ಗೌರವ ಹೆಚ್ಚುತ್ತದೆ. ಗದುಗಿನ ಪುಣ್ಯಾಶ್ರಮದ ಮಣ್ಣು ತಾಕಿದರೆ ಸಾಕು, ಎಲ್ಲರಿಗೂ ಸಂಗೀತದ ನಾದ ತಟ್ಟುತ್ತದೆ. ಈ ದಿಸೆಯಲ್ಲಿ ಪುಟ್ಟರಾಜ ಗವಾಯಿಗಳ ಕುರಿತು ಕಾರ್ಯಕ್ರಮ ಆಯೋಜಿಸಿರುವುದು ಕನ್ನಡ ಸಾಹಿತ್ಯ ಪರಿಷತ್ ಗೆ ಧನ್ಯವಾದಗಳನ್ನು ಸಲ್ಲಿಸಿದರು.

ಸಮಾರಂಭ ಉದ್ಘಾಟಿಸಿದ ಡಿಸಿಸಿ ಬ್ಯಾಂಕ್ ನಿರ್ದೇಶಕ ಗೌತಮ ವೈಜನಾಥ ಪಾಟೀಲ ಅವರುಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ, ಗಾನಯೋಗಿ ಪುಟ್ಟರಾಜ ಕವಿ ಗವಾಯಿಗಳು ಕರ್ನಾಟಕದ ಮಹಾನ್ ಸಂಗೀತ ಸಾಧಕರು. ದೃಷ್ಟಿಹೀನರಾಗಿದ್ದರೂ ಸಂಗೀತ, ಸಾಹಿತ್ಯ ಮತ್ತು ಸಮಾಜ ಸೇವೆಯ ಮೂಲಕ ಅಸಾಧಾರಣ ಸಾಧನೆ ಮಾಡಿ ನಾಡಿನ ಸಾವಿರಾರು ಜನರ ಬದುಕಿಗೆ ಬೆಳಕಾದರು. ಇಂಥ ಮಹಾತ್ಮನನ್ನು ಪರಿಷತ್ತು ವಿಶಿಷ್ಟ ಕಾರ್ಯಕ್ರಮದ ಮೂಲಕ ನೆನೆಯಲಾಗಿದೆ. ಆಧ್ಯಾತ್ಮಕ ವಿಚಾರಗಳ ಪ್ರಚಾರಗೈಯ್ಯುತ್ತಿರುವ ನಾಡಿನ ಶ್ರೇಷ್ಠ ಪ್ರವಚನಕಾರರನ್ನು ಪರಿಷತ್ತು ನಾಡಿನಲ್ಲೇ ಇದೆ ಮೊದಲ ಬಾರಿ ಗೌರವಿಸಲಾಗಿದೆ. ಇಂಥ ಪ್ರಥಮ ಕಾರ್ಯಕ್ರಮಗಳಿಗೆ ಕಲಬುರಗಿ ಜಿಲ್ಲಾ ಕಸಾಪ ಸಾಕ್ಷಿಯಾಗಿದೆ ಎಂದು ಮಾರ್ಮಿಕವಾಗಿ ಹೇಳಿದರು.

ಸಹಕಾರಿ ಧುರೀಣ ಚನ್ನಮಲ್ಲಯ್ಯ ಹಿರೇಮಠ ಜೇವರ್ಗಿ, ನಗನೂರಿನ ಜಗದೀಶ ಶರಣರು, ಮಹಿಳಾ ಸಂಘಟಕಿ ಜಯಶ್ರೀ ಮುಚಳಂಬಿ, ಜಿಲ್ಲಾ ಕಸಾಪ ಕಾರ್ಯದರ್ಶಿಗಳಾದ ಶಿವರಾಜ ಅಂಡಗಿ, ಧರ್ಮಣ್ಣ ಎಚ್ ಧನ್ನಿ, ಕೋಶಾಧ್ಯಕ್ಷ ಶರಣರಾಜ ಛಪ್ಪರಬಂದಿ, ಶ್ರೀ ರಾಗ ಸಂಗಮ ಸೇವಾ ಟ್ರಸ್ಟ್ ಅಧ್ಯಕ್ಷೆ ಶ್ವೇತಾ ಆರ್ ಪಾಟೀಲ, ನಾಗಲಿಂಗಯ್ಯ ಸ್ಥಾವರಮಠ ಸುಂಟನೂರ ಮಾತನಾಡಿದರು. ಪ್ರಮುಖರಾದ ಧರ್ಮರಾಜ ಜವಳಿ, ಗಣೇಶ ಚಿನ್ನಾಕಾರ, ರಾಜೇಂದ್ರ ಮಾಡಬೂಳ, ಪರಮಾನಂದ ಸರಸಂಬಿ, ಸೋಮಶೇಖರಯ್ಯಾ ಹೊಸಮಠ, ಹಣಮಂತರಾವ ಪೆಂಚನಪಳ್ಳಿ ಸೇರಿ ಅನೇಕರು ಉಪಸ್ಥಿತರಿದ್ದರು.

ಈ ಸಮಾರಂಭದ ವಿಶೇಷ ಆಕರ್ಷಣೆಯಾಗಿ ಕಳೆದ ಹಲವು ದಶಕಗಳಿಂದ ಜಿಲ್ಲೆಯ ವಿವಿಧ ಭಾಗಗಳಲ್ಲಿ ತಮ್ಮ ಪ್ರವಚನಗಳ ಮೂಲಕ ಆಧ್ಯಾತ್ಮಿಕ ಮೌಲ್ಯಗಳು, ಸಾಮಾಜಿಕ ಜಾಗೃತಿ ಹಾಗೂ ಸಾಂಸ್ಕೃತಿಕ ಅರಿವು ಮೂಡಿಸುತ್ತಿರುವ ಜಿಲ್ಲೆಯ 31 ಜನ ಹಿರಿಯ ಮತ್ತು ಖ್ಯಾತ ಪ್ರವಚನಕಾರರಿಗೆ ಪ್ರವಚನ ಪ್ರವೀಣ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

# ಸುಧೀಕ್ಷಾ ಸಾಧನೆ ಇತರರಿಗೆ ಸ್ಫೂರ್ತಿ ತರಲಿ: ಸೋಮಶೇಖರ ರೆಡ್ಡಿ



**ಬಳ್ಳಾರಿ:ಜು,17–** ಏಷಿಯನ್ ಅಂಡರ್–23 ಅಥ್ಲೆಟಿಕ್ಸ್ ಚಾಂಪಿಯನ್ಶಿಪ್2026ರಲ್ಲಿ 4100 ಮೀಟರ್ಸ್ ರಿಲೇ ಸ್ಪರ್ಧೆಯಲ್ಲಿ ಭಾರತಕ್ಕೆ ಮೊಟ್ಟಮೊದಲ ಬಾರಿಗೆ ಬೆಳ್ಳಿ ಪದಕ ತಂದು ದೇಶದ ಕೀರ್ತಿಯನ್ನು ವಿಶ್ವದ ವೇದಿಕೆಯಲ್ಲಿ ಎತ್ತಿಹಿಡಿದ ಬಳ್ಳಾರಿಯ ಹೆಮ್ಮೆಯ ಪುತ್ರಿ ಸುಧೀಕ್ಷಳನ್ನು ನಗರದ ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ ಸನ್ಮಾನಿಸಿ ಗೌರವಿಸಿದ್ದಾರೆ.

ನಗರದ ಸತ್ಯನಾರಾಯಣಪೇಟೆಯ ನಿಜಲಿಂಗಪ್ಪ ಕಾಲೋನಿಯಲ್ಲಿರುವ ಅವರ ನಿವಾಸಕ್ಕೆ ಭೇಟಿ ನೀಡಿ ಸನ್ಮಾನಿಸಿ ಅಭಿನಂಧಿಸಿದರು.

ತಮ್ಮ ಸಾಧನೆಯ ಮೂಲಕ ಬಳ್ಳಾರಿ ಜಿಲ್ಲೆಯಷ್ಟೇ ಅಲ್ಲದೆ ಇಡೀ ಕರ್ನಾಟಕ ಹಾಗೂ ಭಾರತದ ಕೀರ್ತಿಯನ್ನು ಹೆಚ್ಚಿಸಿರುವ ಸುಧೀಕ್ಷಾಳ ಈ ಸಾಧನೆ ಯುವ ಕ್ರೀಡಾಪಟುಗಳಿಗೆ ಸ್ಫೂರ್ತಿದಾಯಕವಾಗಿದೆ.

ಮುಂದಿನ ದಿನಗಳಲ್ಲಿ ಇನ್ನಷ್ಟು ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದ ಸಾಧನೆಗಳನ್ನು ಮಾಡಿ ಭಾರತದ ತ್ರಿವರ್ಣ ಧ್ವಜವನ್ನು ಇನ್ನಷ್ಟು ಎತ್ತರದಲ್ಲಿ ಹಾರಿಸುವಂತಾಗಲಿ ಎಂದು ಹಾರೈಸಿದರು.

ಈ ವೇಳೆ ಬಿಜೆಪಿ ಪಕ್ಷದ ಮುಖಂಡರಾದ ಹಲಕುಂದಿ ವೀರನಗೌಡ, ಸಿಂದವಾಳ ಮಹೇಶ್ ಗೌಡ, ದೊಡ್ಡ ಸಂಗಪ್ಪ ಮೊದಲಾದವರು ಇದ್ದರು.

# ಮಂಡ್ಯ ಬರ ಜಿಲ್ಲೆ ಎಂದು ಘೋಷಣೆ ಮಾಡುವಂತೆ ಒತ್ತಾಯಿಸಿ ಕರವೇ ಪ್ರತಿಭಟನೆ




**ಮಂಡ್ಯ:ಜು.17:–** ಮಂಡ್ಯ ಜಿಲ್ಲೆಯನ್ನು ಬರ ಪೀಡಿತ ಜಿಲ್ಲೆ ಎಂದು ಘೋಷಣೆ ಮಾಡಿ ಜಿಲ್ಲೆಯ ಎಲ್ಲಾ ರೈತರಿಗೆ ಪರಿಹಾರ ಘೋಷಿಸುವ ಜೊತೆಗೆ ಬೆಳೆಗಳನ್ನು ರಕ್ಷಿಸಲು ನಾಲೆಗಳಿಗೆ ನೀರು ಹರಿಸಬೇಕು ಎಂದು ಕೇಂದ್ರ ಮತ್ತು ರಾಜ್ಯ ಸರ್ಕಾರವನ್ನು ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ನಗರದ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನೆಡೆಸಿದರು. ಡಿಜಿಟಲ್ಪತ್ರಿಕೆ

ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಘಟಕದ ಅಧ್ಯಕ್ಷ ಎಸ್.ಡಿ.ವೇಣು ಮಾತನಾಡಿ

ಮಂಡ್ಯ ಜಿಲ್ಲೆಯಲ್ಲಿ ಶೇಕಡ ಸುಮಾರು 60 ರಷ್ಟು ಬೆಳೆಗಳು ಮಂಡ್ಯ ಜಿಲ್ಲೆಯಲ್ಲಿ ಬೆಳೆದು ನಿಂತಿದೆ.ಏನು ಕಬ್ಬು, ಭತ್ತ ಮತ್ತು ವಿವಿಧ ಹಣ್ಣು, ತರಕಾರಿ, ತೋಟಗಾರಿಕೆ ಬೆಳೆಗಳು ಎಲ್ಲ ಇದೆ. ಇವತ್ತು ಎಲ್ಲಾ ಸುಮಾರು ಶೇಕಡ 60 ರಷ್ಟು ಸಂಪೂರ್ಣವಾಗಿ ಒಣಗಿದೆ.ಕೆಆರ್ ಎಸ್ ನಲ್ಲಿ ಹಿಂದೆ 75 ಅಡಿ ಇದ್ದಂತಹ ಸಂದರ್ಭದಲ್ಲೂ ಬೆಳೆಗಳಿಗೆ ನೀರು ಹರಿಸಿರುವಂತಹ ಉದಾಹರಣೆ ಇದೆ. ಈಗ 92 ಅಡಿ ಏಖಖ ಡ್ಯಾಮ್ ಅಲ್ಲಿ ನೀರಿದೆ.ಒಂದು ಕಟ್ಟು ಪದ್ಧತಿಯಲ್ಲಿ ನೀರು ಹರಿಸಿದರೆ ಈಗ ಉಳಿದಂತಹ ಬೆಳೆಗಳು ಉಳಿದುಕೊಳ್ಳುತ್ತವೆ ಹಾಗೂ ರೈತನ ಬದುಕು ಉಳಿಯುತ್ತದೆ.ಈಗ ಮುಂಗಾರು ಮಳೆ ಕೈಕೊಟ್ಟು ಮೂರು ನಾಲ್ಕು ತಿಂಗಳು ಆಯ್ತು,ಬಿತ್ತನೆ ಕಾರ್ಯ ಆಗಿಲ್ಲ ಆವಾಗ್ಲೂ ಬೆಳೆ ಸಂಕಷ್ಟದಲ್ಲಿ ರೈತ ಸಿಲುಕಿಕೊಂಡಿದ್ದಾನೆ. ಕೂಡಲೇ ಮಂಡ್ಯ ಜಿಲ್ಲೆಯನ್ನು ಬರಪೀಡಿತ ಜಿಲ್ಲೆ ಅಂತ ಘೋಷಣೆ ಮಾಡಿ ಪ್ರತಿ ರೈತನಿಗೂ ಪರಿಹಾರ ಘೋಷಣೆ ಮಾಡಬೇಕು ಎಂದು ಹೇಳಿ ಕರ್ನಾಟಕ ರಕ್ಷಣಾ ವೇದಿಕೆ ಮಂಡ್ಯ ಜಿಲ್ಲಾ ಘಟಕ ಹೋರಾಟವನ್ನು ಇಟ್ಟುಕೊಂಡಿದೆ.ಕೂಡಲೇ ಏನಾದರೂ ನಾಲೆಗಳಿಗೆ ನೀರನ್ನು ರಾಜ್ಯ ಸರ್ಕಾರ ಇವತ್ತು ಏನು ಸಭೆಗಳನ್ನ ಮಾಡಿ ಕೂಡಲೇ

ನಾಲೆಗಳಿಗೆ ನೀರು ಹರಿಸಲಿಲ್ಲ ಅಂತ ಅಂದ್ರೆ ಕರ್ನಾಟಕ ರಕ್ಷಣಾ ವೇದಿಕೆ ಮುಂದಿನ ದಿನಗಳಲ್ಲಿ ಜನಾಂದೋಲನ ಮಾಡಿಕೊಂಡು ಕೆಆರ್ ಎಸ್ ಮುತ್ತಿಗೆ ಹಾಕುವ ಕೆಲಸವನ್ನ ಮಾಡುತ್ತದೆ. ಕೂಡಲೇ ಜಿಲ್ಲೆಯ ಜನಪ್ರತಿನಿಧಿಗಳು ಸುಮ್ನೆ ಬೂಟಾಟಿಕೆ ಹೇಳಿಕೆಗಳನ್ನು ಕೊಡೋದನ್ನ ನಿಲ್ಲಿಸಿ ಕೂಡಲೇ ರೈತರ ಸಂಕಷ್ಟಕ್ಕೆ ನಿಲ್ಲಬೇಕು ಜೊತೆಗೆ ಇವತ್ತೇನು ಬೆಳೆ ನಷ್ಟ ಆಗಿದೆ ಮತ್ತೆ ಮಂಡ್ಯ ಜಿಲ್ಲೆಯ ಬರಪೀಡಿತ ಜಿಲ್ಲೆ ಅಂತ ಘೋಷಣೆ ಮಾಡಿ, ಎಕರೆಗೆ 50,000 ರೂ ಪರಿಹಾರ ಘೋಷಣೆ ಮಾಡಬೇಕು ಎಂದು ಕೇಂದ್ರ ಹಾಗೂ ರಾಜ್ಯ ಸರ್ಕಾರವನ್ನು ಒತ್ತಾಯ ಮಾಡಿದರು.

ಪ್ರತಿಭಟನೆಯಲ್ಲಿ ಕರವೇ ರಾಜ್ಯ ಸಮಿತಿ ಉಪಾಧ್ಯಕ್ಷ ಎಂ.ಎಸ್ ಚಿದಂಬರ್, ಮಹಿಳಾ ಘಟಕ ಅಧ್ಯಕ್ಷ ಸಿ.ಜೆ ಸುಜಾತಕೃಷ್ಣ, ಪುಟ್ಟಮಲ್ಲಯ್ಯ, ಸರಸ್ವತಿ, ತೇಜು ಕುಮಾರ್, ಯಶ್ವಂತ್, ಎಂ.ಪಿ ಸ್ವಾಮಿ,ಸ್ವಾಮಿಗೌಡ, ಎಚ್ ಎಲ್ ಲೀಲಾ, ಉದಯ್, ರವೀಂದ್ರ, ಎಂ.ಜಿ. ಕಾಂತರಾಜು, ಗಿರಿ ಕುಮಾರ್, ಚೇತನ್ ಕುಮಾರ್, ಚೆನ್ನೇಗೌಡ, ಮಹದೇವ, ಪ್ರಕಾಶ್, ಯೋಗಾನಂದ, ಯಶವಂತ್, ನಜೀರ್, ದೇವರಾಜ, ರಾಧಾ, ವಸಂತ, ಶೀಲಾ, ಶೋಭಾ ಸೇರಿದಂತೆ ಹಲವರು ಹಾಜರಿದ್ದರು

# ಶ್ರೀ ಹಡಪದ ಅಪ್ಪಣ್ಣನವರ ಜಯಂತಿ: ಪೂರ್ವಸಿದ್ಧತಾ ಸಭೆ



**ಗದಗ,ಜು17:** ಶ್ರೀ ಹಡಪದ ಅಪ್ಪಣ್ಣನವರ ಜಯಂತಿಯನ್ನು ಜುಲೈ 29 ರಂದು ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ದಲ್ಲಿ ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶ್ರೀ ಹಡಪದ ಅಪ್ಪಣ್ಣನವರ ಜಯಂತಿ ನಿಮಿತ್ತ ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು.

ತಾಲೂಕು ಮಟ್ಟದಲ್ಲಿಯೂ ಜಯಂತಿ ಆಚರಣೆಗೆ ಕ್ರಮ ವಹಿಸಬೇಕು. ಶಾಲಾ ಕಾಲೇಜುಗಳಲ್ಲಿ, ಗ್ರಾಮ ಪಂಚಾಯಿತಿಗಳಲ್ಲಿ, ಸರ್ಕಾರಿ ಕಚೇರಿಗಳಲ್ಲಿ ಶ್ರೀ ಹಡಪದ ಅಪ್ಪಣ್ಣನವರ ಜಯಂತಿ ಆಚರಿಸಲು ಕ್ರಮ ವಹಿಸಬೇಕು. ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ಸಮಾಜದ ಹಿರಿಯರಿಗೆ, ಎಸ್ ಎಸ್ ಎಲ್.ಸಿ. ಹಾಗೂ ಪಿ.ಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮವು ಜಯಂತಿ ದಿನದಂದು ಜರುಗಲಿದೆ. ವಿವಿಧ ಇಲಾಖೆ ಅಧಿಕಾರಿಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಿ ಜಯಂತಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಲು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿಗಳು ತಿಳಿಸಿದರು.

ಶಿಷ್ಟಾಚಾರದನ್ವಯ ಆಮಂತ್ರಣ ಮುದ್ರಣಕ್ಕೆ ಕ್ರಮ ವಹಿಸಬೇಕು. ಒಟ್ಟಾರೆಯಾಗಿ ಶ್ರೀ ಹಡಪದ ಅಪ್ಪಣ್ಣನವರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ನಿರ್ದೇಶನ ನೀಡಿದರು.

ಇದೇ ಸಂದರ್ಭದಲ್ಲಿ ಊಟೋಪಹಾರದ ವ್ಯವಸ್ಥೆ, ವೇದಿಕೆ ವ್ಯವಸ್ಥೆ, ಬ್ಯಾನರ್ ಅಳವಡಿಕೆ, ಉಪನ್ಯಾಸಕರ ಆಯ್ಕೆ ಕುರಿತು ಚರ್ಚಿಸಲಾಯಿತು ಮತ್ತು ಸಮಾಜದ ಮುಖಂಡರು, ಪದಾಧಿಕಾರಿಗಳು ತಮ್ಮ ತಮ್ಮ ಸಲಹೆ ಸೂಚನೆಗಳನ್ನು ನೀಡಿದರು.

ಸಭೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ.ಮಸನಾಯಕ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಎಂ.ಎಂ.ತುಂಬರಮಟ್ಟಿ, ಸಮಾಜದ ಹಿರಿಯ ಮುಖಂಡರು, ಗಣ್ಯರು , ಪದಾಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು ಹಾಜರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಬಸವರಾಜ. ವ್ಹಿ. ಬಳ್ಳಾರಿ ಸರ್ವರಿಗೂ ಸ್ವಾಗತಿಸಿ ವಂದಿಸಿದರು.

# ನವ ವಿವಾಹಿತನ ಬರ್ಬರ ಹತ್ಯೆ

**ಬಳ್ಳಾರಿ, ಜು.17:** ನವವಿವಾಹಿತ ಯುವಕನನ್ನು ದುಷ್ಕರ್ಮಿಗಳು ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ನಗರದ 29ನೇ ವಾರ್ಡ್ನ ಬಂಡಿಹಟ್ಟಿ ಪ್ರದೇಶದ ಸಮತಾ ನಗರದಲ್ಲಿ ನಿನ್ನೆ ರಾತ್ರಿ ನಡೆದಿದೆ.ಮೃತನು ನಬಿ ರಸೂಲ್ , ಬೋಟಿ ಮಾರ್ಕೆಟ್ನಲ್ಲಿ ಕೆಲಸ ಮಾಡುವುದರ ಜೊತೆಗೆ ಗಾರೆ ಕೆಲಸವನ್ನೂ ಸಹ ಮಾಡುತ್ತಿದ್ದ. ಕಳೆದ 15 ದಿನಗಳ ಹಿಂದೆ ಈತ ವಿಚ್ಛೇದನ ಪಡೆದಿದ್ದ ಮಹಿಳೆಯನ್ನು ಪ್ರೀತಿಸಿ ಹೊರಗೆ ಕರೆದುಕೊಂಡು ಹೋಗಿ. ಬಳಿಕ ಇಬ್ಬರೂ ಮನೆಗೆ ಮರಳಿ. ಕುಟುಂಬದವರ ಒಪ್ಪಿಗೆಯೊಂದಿಗೆ ನಿನ್ನೆ ಮದುವೆ ಹಾಗೂ ರಿಸೆಪ್ಷನ್ ಕಾರ್ಯಕ್ರಮ ನಡೆದಿತ್ತು.



ರಿಸೆಪ್ಷನ್ ಮುಗಿದ ಬಳಿಕ ರಾತ್ರಿ 11.30 ರ ಸುಮಾರಿಗೆ ಗೆಳೆಯನಿಂದ ಫೋನ್ ಕರೆ ಬಂದಿದೆಂದು ನಬಿ ಮನೆಯಿಂದ ಹೋದವ ಮರಳಿ ಮನೆಗೆ ಬಂದಿರಲಿಲ್ಲ. ಮನೆಯಿಂದ ಅನತಿ ದೂರದಲ್ಲೇ ಕೆರೆಕುಂಟೆ ಹತ್ತಿರ ಮಚ್ಚು, ಚಾಕುವಿನಿಂದ ತಿವಿದು ಕೊಲೆ ಮಾಡಲಾಗಿದೆ. ರಾತ್ರಿ 2 ಗಂಟೆಗೆ ಪತ್ತೆಯಾಗಿದೆ.ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸುಮನ್ ಪನ್ನೆಕರ್, ಶ್ವಾನದಳ ಮತ್ತವರ ಸಿಬ್ಬಂದಿಯೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.ಹತ್ಯೆಗೆ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ. ಪೊಲೀಸರು ತನಿಖೆ ಮುಂದುವರಿಸಿದ್ದಾರೆ. ಕೌಲ್ ಬಜಾರ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE